91(383) ಶ್ರೀ ಕ್ಯಾತಸಂದ್ರ ಎನ್.ರಾಜಣ್ಣ(ಬೆಳ್ಳಾವಿ) ಮಾನ್ಯ ಕಂದಾಯ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಕಂದಾಯ ಇಲಾಖೆಯಲ್ಲಿ ಗ್ರಾಮ ಸಹಾಯಕರ ಹುದ್ದೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು ?

ಆ) ಇವರುಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಗರ್ಡೆ ಸೇರಿದ ನೌಕರರ ಸಂಖ್ಯೆ ಎಷ್ಟು?

ಇ) ಗ್ರಾಮ ಸಹಾಯಕರಿಗೆ ಮಾಸಿಕ ಭತ್ಯೆಯನ್ನು ಪ್ರಾರಂಭದಲ್ಲಿ ಎಷ್ಟು ನೀಡಲಾಗುತ್ತಿತ್ತು: ಮಾಸಿಕ ಭತ್ಯೆಯು ಹೆಚ್ಚಳವನ್ನು ಯಾವ ಯಾವ ವರ್ಷಗಳಲ್ಲಿ ಎಷ್ಟೆಷ್ಟು ಮಾಡಲಾಗಿದೆ?

ಈ) ಗ್ರಾಮ ಸಹಾಯಕರ ಸೇವೆಯನ್ನು 'ಡಿ' ದರ್ಜೆಯ ನೌಕರರಾಗಿ ಖಾಯಂಗೊಳಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ?

ಶ್ರೀ ಎಂ.ಪಿ. ಪ್ರಕಾಶ್(ಕಂದಾಯ ಸಚಿವರು) :

ಅ) 9665

ಆ) ಪರಿಶಿಷ್ಟ ಜಾತಿ – 3812

ಪರಿಶಿಷ್ಟ ಪಂಗಡ – 2224

ಇ) ದಿನಾಂಕ : 23.9.82ರಿಂದ ಮಾಸಿಕ ರೂ. 100/-ರಂತೆ

ದಿನಾಂದ : 1.4.2000ರಿಂದ ಮಾಸಿಕ ರೂ. 1000/- ರಂತೆ

ಈ) ಇಲ್ಲ

93(385) ಶ್ರೀ ಕ್ಯಾತಸಂದ್ರ ಎನ್.ರಾಜಣ್ಣ (ಬೆಳ್ಳಾವಿ) ಮಾನ್ಯ ಕಾರ್ಮಿಕ ಮತ್ತು ಹಜ್ ರಾಜ್ಯ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಕಾರ್ಮಿಕ ಇಲಾಖೆಯ ವತಿಯಿಂದ ಬೀಡಿ ಕಾರ್ಮಿಕರಿಗಾಗಿ ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು ?

ಆ) ತುಮಕೂರು ಜಿಲ್ಲೆಯಲ್ಲಿ ಬೀಡಿ ಕಾರ್ಮಿಕರ ಕಲ್ಯಾಣ ಕಾರ್ಯಕ್ರಮಗಳಡಿಯಲ್ಲಿ ಪರಿಣಾಮಕಾರಿಯಾಗಿ ಜಾರಿ ಮಾಡಿರುವ ಕಲ್ಯಾಣ ಕಾರ್ಯಕ್ರಮಗಳು ಯಾವುವು ;

ಇ) ಬೀಡಿ ಕಾರ್ಮಿಕರಿಗಾಗಿ ತುಮಕೂರು ಜಿಲ್ಲೆಯಲ್ಲಿ ಕಳೆದ ಮೂರು ಹಣಕಾಸು ವರ್ಷಗಳಲ್ಲಿ ಪರಿಣಾಮಕಾರಿಯಾಗಿ ಜಾರಿ ಮಾಡಿದ ಕಾರ್ಯಕ್ರಮಗಳ ಬಗ್ಗೆ ಮತ್ತು ಕಾರ್ಯಕ್ರಮವಾರು ವಿವರ ಮಾಡಿದ ಹಣದ ವಿವರಗಳನ್ನು ನೀಡುವುದು.

ಶ್ರೀ ತನ್ವೀರ್ ಸೇಠ್ (ಕಾರ್ಮಿಕ ಮತ್ತು ಹಜ್ ರಾಜ್ಯ ಸಚಿವರು) :

ಅ) ಕಾರ್ಮಿಕ ಇಲಾಖೆಯು ವತಿಯಿಂದ ಯಾವುದೇ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುವುದಿಲ್ಲ. ಕೇಂದ್ರ ಕಲ್ಯಾಣ ಆಯುಕ್ತರು ಯೋಜನೆಗಳನ್ನು ರೂಪಿಸುತ್ತಿದ್ದು, ಇದರಲ್ಲಿ ಮಸತಿ ಸೌಲಭ್ಯ ಕಾರ್ಯಕ್ರಮವನ್ನು ಜಾರಿಗೊಳಿಸುವಲ್ಲಿ ರಾಜ್ಯ ಸರ್ಕಾರ ಸಹಕಾರ ನೀಡುತ್ತಿದೆ.

ಆ) ಕೇಂದ್ರ ಕಲ್ಯಾಣ ಆಯುಕ್ತರ ಮುಖಾಂತರ ಈ ಕೆಳಕಂಡ ಕಾರ್ಯಕ್ರಮಗಳನ್ನು ಜಾರಿಗೊಳಿಸಲಾಗುತ್ತಿದೆ.